**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**22.07.2024** **14.30 hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

- **ವಾಲ್ಮೀಕಿ ನಿಗಮ ಹಗರಣ; ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ- ಮುಖ್ಯಮಂತ್ರಿ ಸಿದ್ದರಾಮಯ್ಯ**
- **ರಾಜ್ಯದಲ್ಲಿ ಅಗತ್ಯವಿರುವ ಕಡೆ ಪಾಲಿಟೆಕ್ನಿಕ್ ಕಾಲೇಜುಗಳ ಸ್ಥಾಪನೆಗಾಗಿ ಸಮಿತಿ ರಚನೆ- ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್**
- **ಅಕ್ರಮ-ಸಕ್ರಮ ಯೋಜನೆಯಡಿ ಶೇಕಡ ೯೫ ರಷ್ಟು ಅರ್ಜಿಗಳ ವಿಲೇವಾರಿ - ಕಂದಾಯ ಸಚಿವ ಕೃಷ್ಣಬೈರೇಗೌಡ**
- **ನೆರೆ ಹಾನಿ ಪರಿಹಾರ ಹೆಚ್ಚಿಸುವಂತೆ ರಾಜ್ಯ ಸರ್ಕಾರಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹ**

**<><*<><>*><>**

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಬಹುಕೋಟಿ ಹಗರಣಕ್ಕೂ ತಮಗೂ ಸಂಬಂಧವೇ ಇಲ್ಲ ಎಂದ ಮೇಲೆ ತಾವೇಕೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರತಿಪಕ್ಷವನ್ನು ಪ್ರಶ್ನಿಸಿದ್ದಾರೆ. ವಿಧಾನಪರಿಷತ್‌ನಲ್ಲಿಂದು ನಿಯಮ ೬೮ ರಡಿ ಬಿಜೆಪಿ ಮತ್ತು ಜೆಡಿಎಸ್ ಮಂಡಿಸಿದ್ದ ನಿಲುವಳಿ ಸೂಚನೆ ಮೇಲೆ ಸುದೀರ್ಘ ಉತ್ತರ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ವಾಲ್ಮೀಕಿ ಹಗರಣದಲ್ಲಿ ನಡೆದಿರುವ ಹಗರಣಕ್ಕೂ ತಮಗೂ ಸಂಬಂಧವೇ ಇಲ್ಲ. ಆದರೂ ಪ್ರತಿಪಕ್ಷದವರು ತಮ್ಮ ರಾಜೀನಾಮೆ ಕೇಳುತ್ತಿರುವುದು ಆಶ್ಚರ್ಯ ಉಂಟುಮಾಡಿದೆ ಎಂದರು. ಮುಖ್ಯಮಂತ್ರಿಗಳ ಉತ್ತರಕ್ಕೆ ಸಿಡಿಮಿಡಿಗೊಂಡ ಪ್ರತಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು, ಅವರ ಉತ್ತರಕ್ಕೆ ಅಡ್ಡಿಪಡಿಸಿದ್ದರಿಂದ ಸದನದಲ್ಲಿ ಕೋಲಾಹಲ, ಗದ್ದಲ, ಮಾತಿನ ಚಕಮಕಿ, ಆರೋಪ, ಪ್ರತ್ಯಾರೋಪ ನಡೆಯಿತು. ಈ ವೇಳೆ ಬಿಜೆಪಿ ಸದಸ್ಯ ಸಿ.ಟಿ.ರವಿ ಮಾತನಾಡಿ, ಹಗರಣ ನಡೆದಿರುವುದು ಸುಳ್ಳಾದರೆ ಮಾಜಿ ಸಚಿವ ಬಿ.ನಾಗೇಂದ್ರ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು ಏಕೆ? ಶಾಸಕ ಬಸನಗೌಡ ದದ್ದಲ್ ಜಾರಿ ನಿರ್ದೇಶನಾಲಯದ ವಿಚಾರಣೆ ಎದುರಿಸುತ್ತಿರುವುದು ಏಕೆ ಎಂದು ಪ್ರಶ್ನಿಸಿದರು. ಇದಕ್ಕೆ ದನಿಗೂಡಿಸಿದ ಬಿಜೆಪಿಯ ಎನ್.ರವಿಕುಮಾರ್, ಮುಖ್ಯಮಂತ್ರಿಗಳು ಹಗರಣ ನಡೆದಿಲ್ಲ ಎಂದು ಸದನಕ್ಕೆ ಸುಳ್ಳು ಹೇಳುತ್ತಿದ್ದಾರೆ ಎಂದರು. ಇದಕ್ಕೆ ಸಿಡಿಮಿಡಿಗೊಂಡ ಸಿದ್ದರಾಮಯ್ಯ, ನನ್ನನ್ನು ದಾರಿ ತಪ್ಪಿಸಲೆಂದೇ ಬಿಜೆಪಿಯವರು ಷಡ್ಯಂತ್ರ ಮಾಡುತ್ತಿದ್ದಾರೆ ಎಂದು ಹೇಳಿದರು.

**<><*<><>*><>**

ಕೇಂದ್ರ ಸರ್ಕಾರ ಗರ್ಭಕಂಠದ ಕ್ಯಾನ್ಸರ್ ರೋಗಿಗಳಿಗೆ ಉಚಿತವಾಗಿ ಔಷಧ ನೀಡುವ ವ್ಯವಸ್ಥೆ ಜಾರಿ ಮಾಡಿದರೆ, ರಾಜ್ಯದಲ್ಲೂ ಅನುಷ್ಠಾನ ಮಾಡುವುದಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡುರಾವ್ ಹೇಳಿದ್ದಾರೆ. ವಿಧಾನಪರಿಷತ್‌ನಲ್ಲಿ ಸದಸ್ಯ ತಿಪ್ಪೇಸ್ವಾಮಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕೇಂದ್ರ ಸರ್ಕಾರ ಗರ್ಭಕಂಠದ ಕ್ಯಾನ್ಸರ್ ಇರುವವರಿಗೆ ಎಚ್‌ವಿವಿ ವ್ಯಾಕ್ಸಿನ್ ಕೊಡುವ ಬಗ್ಗೆ ಈಗಾಗಲೇ ಘೋಷಣೆ ಮಾಡಿದೆ. ಇದನ್ನು ರಾಜ್ಯಕ್ಕೂ ನೀಡಬೇಕೆಂದು ಕೇಂದ್ರ ಆರೋಗ್ಯ ಸಚಿವರಿಗೆ ಪತ್ರ ಬರೆಯಲಾಗಿದೆ ಎಂದು ತಿಳಿಸಿದರು. ರಾಜ್ಯದಲ್ಲಿ ದಿನದಿಂದ ದಿನಕ್ಕೆ ನಕಲಿ ವೈದ್ಯರ ಹಾವಳಿ ಹೆಚ್ಚಾಗುತ್ತಿದ್ದು, ಅಂಥವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಜರುಗಿಸುತ್ತೇವೆ ಎಂದು ಇದೇ ವೇಳೆ ದಿನೇಶ್ ಗುಂಡೂರಾವ್ ಹೇಳಿದರು. ಕಲಬುರಗಿ ಜಿಲ್ಲೆಯಲ್ಲಿ ನಕಲಿ ವೈದ್ಯರ ಹಾವಳಿ ಹೆಚ್ಚುತ್ತಿದ್ದು, ಸರ್ಕಾರ ಏನು ಕ್ರಮ ಕೈಗೊಂಡಿದೆ ಎಂದು ಸದಸ್ಯ ತಿಪ್ಪಣ್ಣ ಕನಕನೂರು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಸಚಿವರು, ನಕಲಿ ವೈದ್ಯರು ಹೆಚ್ಚಾಗುತ್ತಿರುವುದು

ಸರ್ಕಾರದ ಗಮನಕ್ಕೆ ಬಂದಿದೆ. ಇದು ಅತ್ಯಂತ ಆತಂಕಪಡುವ ವಿಷಯವಾಗಿದೆ. ಇದನ್ನು ನಿಯಂತ್ರಿಸುವುದು ಸರ್ಕಾರದ ಜವಾಬ್ದಾರಿ. ನಕಲಿ ವೈದ್ಯರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು.

<><*<><>*><>

ರಾಜ್ಯದಲ್ಲಿ ಪಾಲಿಟೆಕ್ನಿಕ್ ಕಾಲೇಜುಗಳನ್ನು ಅಗತ್ಯವಿರುವ ಕಡೆ ಪ್ರಾರಂಭಿಸುವ ಬಗ್ಗೆ ಸಮಿತಿ ರಚಿಸಲಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ಹೇಳಿದರು. ವಿಧಾನಪರಿಷತ್‌ನಲ್ಲಿಂದು ಪ್ರಶ್ನೋತ್ತರ ಕಲಾಪದ ವೇಳೆ, ರಾಯಚೂರು ಜಿಲ್ಲೆ ಸಿಂಧನೂರಿಗೆ ಮಂಜೂರಾಗಿದ್ದ ಪಾಲಿಟೆಕ್ನಿಕ್ ಕಾಲೇಜನ್ನು ಬೆಳಗಾವಿ ಜಿಲ್ಲೆ ಕಾಗವಾಡಕ್ಕೆ ಸ್ಥಳಾಂತರ ಮಾಡಲಾಗಿದೆ. ನಮ್ಮದು ಹಿಂದುಳಿದ ಪ್ರದೇಶವಾಗಿದೆ. ಏಕಿಂಥ ತಾರತಮ್ಯ ಎಂದುಸದಸ್ಯ ಬಸನಗೌಡ ಬಾದರ್ಲಿ ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಸಚಿವ ಸುಧಾಕರ್, ಹಿಂದಿನ ಸರ್ಕಾರ ಅವೈಜ್ಞಾನಿಕವಾಗಿ ಪಾಲಿಟೆಕ್ನಿಕ್ ಕಾಲೇಜುಗಳನ್ನು ಮಂಜೂರು ಮಾಡಿದೆ. ಹೀಗಾಗಿ ಸಮಿತಿ ರಚನೆ ಮಾಡಲಾಗಿದೆ. ಈ ವರದಿ ಬಂದ ನಂತರ ಪಾಲಿಟೆಕ್ನಿಕ್ ಕಾಲೇಜುಗಳನ್ನು ಮಂಜೂರು ಮಾಡುತ್ತೇವೆ ಎಂದು ಆಶ್ವಾಸನೆ ನೀಡಿದರು. ಅನುದಾನಿತ ಕಾಲೇಜುಗಳಿಗೆ ಪಾಲಿಟೆಕ್ನಿಕ್ ಕಾಲೇಜು ಅವಶ್ಯಕತೆ ಇದೆ ಎಂಬುದನ್ನು ಸಮಿತಿ ಅಧ್ಯಯನ ನಡೆಸಿ, ವರದಿ ನೀಡುತ್ತದೆ. ಈ ವರದಿ ಬಂದ ನಂತರ ತೀರ್ಮಾನ ಮಾಡುತ್ತೇವೆ ಎಂದು ಸಚಿವರು ತಿಳಿಸಿದರು.

<><*<><>*><>

ಅಕ್ರಮ ಸಕ್ರಮ ಯೋಜನೆಯ ೯೪ ಸಿ ಮತ್ತು ೯೪ ಸಿಸಿ ಅಡಿ ೧೪ ಲಕ್ಷ ಅರ್ಜಿಗಳು ಬಂದಿದ್ದು, ಶೇಕಡ ೯೫ರಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ತಿಳಿಸಿದ್ದಾರೆ. ಹಗರಿಬೊಮ್ಮನಹಳ್ಳಿಯ ಶಾಸಕ ನೇಮಿರಾಜ ನಾಯಕ್, ಅಕ್ರಮ ಸಕ್ರಮ ಯೋಜನೆಯಡಿ ಅರ್ಜಿ ಸಲ್ಲಿಸಲು ಮತ್ತೆ ಅವಕಾಶ ನೀಡಬೇಕೆಂದು ಒತ್ತಾಯಿಸಿದಾಗ ವಿಧಾನಸಭೆಯ ಪರಶ್ನೋತ್ತರದ ಅವಧಿಯಲ್ಲಿ ಉತ್ತರಿಸಿದ ಸಚಿವರು, ೨೦೧೯ರಲ್ಲಿ ಸಿದ್ದರಾಮಯ್ಯನವರ ಸರ್ಕಾರ ಹಾಗೂ ಹಿಂದಿನ ಬಿಜೆಪಿ ಸರ್ಕಾರ ಸೇರಿ ೨೦೨೩ರವರೆಗೂ ಏಳೆಂಟು ವರ್ಷಗಳ ಕಾಲ ಅಕ್ರಮ- ಸಕ್ರಮಕ್ಕೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು ಎಂದು ಮಾಹಿತಿ ನೀಡಿದರು. ಸರ್ಕಾರಿ ಜಮೀನುಗಳನ್ನು ಗುರುತಿಸಿ, ನಿಗಾವಹಿಸಿ ಸಂರಕ್ಷಿಸಲು ರಾಜ್ಯ ಸರ್ಕಾರ ಲ್ಯಾಂಡ್ ಬೀಟ್ ಆನ್‌ಲೈನ್ ವ್ಯವಸ್ಥೆ ಜಾರಿಮಾಡಲಾಗಿದೆ. ಅದರ ಅನುಸಾರ ೧೪.೫ ಲಕ್ಷ ಕಡೆಗಳಲ್ಲಿ ಸರ್ಕಾರಿ ಭೂಮಿ ಗುರುತಿಸಲಾಗಿದೆ. ಅವುಗಳಲ್ಲಿ ಲ್ಯಾಂಡ್ ಬೀಟ್ ವ್ಯವಸ್ಥೆ ಜಾರಿಗೊಳಿಸಲಾಗಿದೆ. ಆಪ್‌ನಲ್ಲಿ ಭೂಮಿಯ ಸರ್ವೇ ನಂಬರ್ ಹಾಗೂ ನಕ್ಷೆಯ ವಿವರಗಳಿರುತವೆ. ಕಂದಾಯ ಅಧಿಕಾರಿಗಳು ನಕ್ಷೆ ಆಧರಿಸಿ, ಸರ್ಕಾರಿ ಭೂಮಿಯಲ್ಲಿ ಒತ್ತುವರಿಯಾಗಿದ್ದರೆ, ಅದ್ದನ್ನು ಗುರುತಿಸಿ ತಹಸೀಲ್ದಾರ್‌ಗೆ ವರದಿ ಸಲ್ಲಿಸಬೇಕು. ಒತ್ತುವರಿಯಾಗಿದ್ದರೆ ಅದನ್ನು ತಕ್ಷಣವೇ ತೆರವು ಮಾಡಿ, ಬೇಲಿ ಹಾಕಿ ಸಂರಕ್ಷಿಸಬೇಕು ಎಂದು ಸಚಿವ ಕೃಷ್ಣಭೈರೇಗೌಡ ಹೇಳಿದರು.

<><*<><>*><>

ರಾಜ್ಯದ ೩೨ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು ತಡೆ ಹಿಡಿಯಲಾಗಿದ್ದು, ಅದನ್ನು ಮರು ಮಂಜೂರಾತಿ ಮಾಡಿಸಲು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿಯವರ ಮನವೊಲಿಕೆ ಮಾಡುವುದಾಗಿ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರದ ಅವಧಿಯಲ್ಲಿ ಎಚ್.ಡಿ.ಕೋಟೆ ಶಾಸಕ ಅನಿಲ್ ಚಿಕ್ಕಮಾದು ಪ್ರಶ್ನೆಗೆ ಉತ್ತರಿಸಿದ ಅವರು, ೨೦೧೭ರಲ್ಲಿ ೩೨ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಮಂಜೂರಾತಿ ನೀಡಲಾಗಿತ್ತು. ನಂತರ ಅದನ್ನು ತಡೆ ಹಿಡಿಯಲಾಗಿದೆ. ಪ್ರಸ್ತಾವನೆ ನೀತಿ ಆಯೋಗದ ಮುಂದಿದೆ. ಪ್ರಸ್ತುತ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ನೀತಿ ಆಯೋಗದ ಸದಸ್ಯರಾಗಿದ್ದಾರೆ. ಅವರೊಂದಿಗೆ ಚರ್ಚಿಸಿ, ೩೨ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

<><*<><>*><>

ವಾಲ್ಮೀಕಿ ನಿಗಮಕ್ಕೆ ಸಂಬಂಧಿಸಿದ ಸುಮಾರು ೪೦ ಕೋಟಿ ರೂಪಾಯಿ ನೇರವಾಗಿ ರಾಜ್ಯ ಸರ್ಕಾರದ ಖಜಾನೆಯಿಂದ ಬೇರೆ ಬೇರೆ ಖಾತೆಗಳಿಗೆ ವರ್ಗಾವಣೆಯಾಗಿರುವ ಬಗ್ಗೆ ಮಾಹಿತಿ ಇದೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟೀಕರಣ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ನವದೆಹಲಿಯಲ್ಲಿಂದು

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಾಲ್ಮೀಕಿ ನಿಗಮದ ಹಗರಣದ ಆಳ ಮತ್ತು ಅಗಲ ನೋಡಿದರೆ ಹೊಸ ತಿರುವುಗಳಿಗೆ ಕಾರಣವಾಗುತ್ತಿದೆ. ಈಗಾಗಲೇ ಅನೇಕ ಖಾತೆಗಳನ್ನು ತೆರೆದು, ಹೈದರಾಬಾದ್‌ಗೆ ಹಣ ವರ್ಗಾವಣೆಯಾಗಿರುವುದು ಬೆಳಕಿಗೆ ಬಂದಿದೆ. ಆದರೆ, ಅದು ಹಣಕಾಸು ಇಲಾಖೆಗೆ ಸಂಬಂಧ ಇಲ್ಲ ಎಂದು ಮುಖ್ಯಮಂತ್ರಿಗಳು ಹೇಳುತ್ತಾರೆ. ಮಾರ್ಚ್ ೩೧ರಂದು ನೇರವಾಗಿ ರಾಜ್ಯ ಸರ್ಕಾರದ ಖಜಾನೆಯಿಂದ ಸುಮಾರು ೪೦ ಕೋಟಿ ರೂಪಾಯಿ ಅಧಿಕೃತ ಖಾತೆಗೆ ಹೋಗದೇ, ಬೇರೆ ಬೇರೆ ಖಾತೆಗಳಿಗೆ ವರ್ಗಾವಣೆಯಾಗಿದೆ ಎಂಬ ಮಾಹಿತಿ ಇದೆ. ಮುಖ್ಯಮಂತ್ರಿಗಳು ಈ ಬಗ್ಗೆ ವಿಧಾನಸಭೆಯಲ್ಲಿ ಸ್ಪಷ್ಟೀಕರಣ ನೀಡಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ಗೋವಿಂದ ಕಾರಜೋಳ ಹಾಜರಿದ್ದರು.

<><*<><>*><>

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಕುರಿತ ಬಿಜೆಪಿ ಹೋರಾಟ ಮುಂದುವರೆಯಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರಂಭದಲ್ಲಿ ಹಗರಣ ನಡೆದೇ ಇಲ್ಲ ಎಂದಿದ್ದ ಮುಖ್ಯಮಂತ್ರಿಗಳು, ಬಳಿಕ ಸಚಿವ ನಾಗೇಂದ್ರ ರಾಜೀನಾಮೆ ಪಡೆದು, ಹಗರಣ ನಡೆದಿರುವುದನ್ನು ಒಪ್ಪಿಕೊಂಡಿದ್ದಾರೆ. ಪರಿಶಿಷ್ಟ ಪಂಗಡಗಳಿಗೆ ಕಾಂಗ್ರೆಸ್ ಸರ್ಕಾರ ದ್ರೋಹ ಬಗೆದಿದೆ ಎಂದು ದೂರಿದರು. ಸದನದಲ್ಲಿ ಸರಿಯಾಗಿ ಉತ್ತರ ನೀಡದೇ, ಕೇವಲ ಜಾಹೀರಾತು ಕೊಟ್ಟಿದ್ದಾರೆ ಎಂದು ಆಕ್ಷೇಪಿಸಿದ ಅವರು, ೧೮೭ ಕೋಟಿ ರೂಪಾಯಿ ಹಗರಣದಲ್ಲಿ ೪೫ ಕೋಟಿ ವಾಪಸ್ ಬಂದಿದೆ ಎಂದು ಮುಖ್ಯಮಂತ್ರಿಗಳು ಮಾಧ್ಯಮಗಳಿಗೆ ತಿಳಿಸಿದ್ದಾರೆ. ಆದರೆ ಈ ಹಣವನ್ನು ಹೊರರಾಜ್ಯದಲ್ಲಿ ಚುನಾವಣೆಗೆ ಬಳಸಲಾಗಿದೆ ಎಂದು ವಿಜಯೇಂದ್ರ ಆರೋಪಿಸಿದರು. ಇದೇ ವೇಳೆ, ನೆರೆ ಹಾನಿ ಸಂಬಂಧ, ಮನೆ ಕುಸಿತಕ್ಕೆ ಒಂದು ಲಕ್ಷ ರೂಪಾಯಿ ಪರಿಹಾರದ ಬದಲು ೫ ಲಕ್ಷ ರೂಪಾಯಿ ಪರಿಹಾರ ನೀಡಬೇಕು. ಗೋಡೆ ಕುಸಿತಕ್ಕೆ ೪೦ ಸಾವಿರ ರೂಪಾಯಿ ಪರಿಹಾರದ ಬದಲಾಗಿ, ಎನ್‌ಡಿಆರ್‌ಎಫ್ ನಿಯಮದ ಪ್ರಕಾರ ೧ ಲಕ್ಷ ರೂಪಾಯಿ ಪರಿಹಾರ ನೀಡುವಂತೆ ಬಿ.ವೈ.ವಿಜಯೇಂದ್ರ ಆಗ್ರಹಿಸಿದರು.

<><*<><>*><>

ಉತ್ತರ ಕನ್ನಡ ಜಿಲ್ಲೆಯಲ್ಲಿ ಗುಡ್ಡ ಕುಸಿತದ ವಿಷಯಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ, ಉತ್ತರ ಕನ್ನಡ ಜಿಲ್ಲೆಯಲ್ಲಿ ಗುಡ್ಡ ಕುಸಿದು ೭ ಜನ ಸಾವನ್ನಪ್ಪಿದ್ದ ಶಿರೂರು ಗ್ರಾಮಕ್ಕೆ ಶನಿವಾರ ಭೇಟಿ ನೀಡಿದಾಗ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನನ್ನ ಬಗ್ಗೆ ಲಘುವಾಗಿ ಮಾತನಾಡುವ ಭರದಲ್ಲಿ ನಮ್ಮ ಹೆಮ್ಮೆಯ ಸೇನೆಯನ್ನೂ ಹೀಗಳೆದಿದ್ದರು. ಇದು ದುರ್ದೈವದ ಸಂಗತಿ ಎಂದು ಹೇಳಿದ್ದಾರೆ. ನೊಂದ ಕುಟುಂಬಗಳ ಕಣ್ಣೀರಿಗೆ ಓಗೊಟ್ಟು, ಸೇನೆಯ ೪೦ಕ್ಕೂ ಹೆಚ್ಚು ವೀರ ಯೋಧರು ರಕ್ಷಣಾ ಕಾರ್ಯಕ್ಕೆ ಧಾವಿಸಿ, ಶೋಧ ಹಾಗೂ ಪರಿಹಾರ ಕಾರ್ಯದಲ್ಲಿ ನಿರತರಾಗಿದ್ದಾರೆ. ಇದಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಆಕ್ಷೇಪಣೆ ಇದ್ದರೇ, ಅವರೇ ಉತ್ತರಿಸಬೇಕು' ಎಂದು ಕೇಂದ್ರ ಸಚಿವರು ಹೇಳಿದ್ದಾರೆ.

<><*<><>*><>

ರಾಜ್ಯ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಿಂದ ಇಂದು ನಡೆದ ಸಮಾರಂಭದಲ್ಲಿ ಮೃತ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದಡಿಯಲ್ಲಿ ನೇಮಕಾತಿ ಆದೇಶ ಪತ್ರವನ್ನು ವಿತರಿಸಲಾಯಿತು. ಅರ್ಹತೆಯನುಸಾರ ಹಾಗೂ ಖಾಲಿ ಹುದ್ದೆಗಳ ಲಭ್ಯತೆಗೆ ಅನುಗುಣವಾಗಿ ಸುಮಾರು ೨೫೦ ಅಭ್ಯರ್ಥಿಗಳನ್ನು ೨೦೨೩ರ ಅಕ್ಟೋಬರ್ ಮತ್ತು ಈ ವರ್ಷದ ಮಾರ್ಚ್‌ನಲ್ಲಿ ದರ್ಜೆ-೩ ಮತ್ತು ದರ್ಜೆ-೪ರ ಖಾಲಿ ಹುದ್ದೆಗಳಿಗೆ ನೇಮಕ ಮಾಡಲಾಗಿದೆ. ಕರ್ನಾಟಕ ರಾಜ್ಯ ಸಾರಿಗೆಯಲ್ಲಿ ಪೇದೆ, ತಾಂತ್ರಿಕ ಸಹಾಯಕ ಮತ್ತು ಸಹಾಯಕ ಸೇರಿ ಒಟ್ಟು ೪೮ ಹುದ್ದೆಗಳಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಲಾಗಿದೆ.

<><*<><>*><>

ಹಾವೇರಿ ಜಿಲ್ಲೆಯಲ್ಲಿ ಮಳೆ ಮುಂದುವರಿದಿದ್ದು, ಇದುವರೆಗೂ ೨೬೩ ಮನೆಗಳಿಗೆ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಹರಿಯುವ ತುಂಗಭದ್ರಾ, ವರದಾ ಹಾಗೂ ಕುಮದ್ವತಿ ನದಿಗಳು ಅಪಾಯ ಮಟ್ಟದಲ್ಲಿ ಹರಿಯುತ್ತಿವೆ. ಹಲವೆಡೆ ನದಿ ಪಾತ್ರದಲ್ಲಿರುವ ಜಮೀನುಗಳಿಗೆ ನೀರು ನುಗ್ಗಿದ್ದು, ಜಲಾವೃತ್ತಗೊಂಡಿದೆ. ಮಳೆಯಿಂದ ಜಿಲ್ಲೆಯ ಹಲವೆಡೆ ನದಿ ನೀರು ಜಮೀನಿಗೆ ನುಗ್ಗಿದ್ದರಿಂದ ೩೧.೨೬ ಹೆಕ್ಟೇರ್‌ನಲ್ಲಿದ್ದ ಮುಂಗಾರು ಬೆಳೆ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ. ನದಿ ಅಚ್ಚುಕಟ್ಟು ಪ್ರದೇಶದಲ್ಲಿರುವ ಗ್ರಾಮಗಳ ಜನರಿಗೆ ಸುರಕ್ಷಿತ ಸ್ಥಳಕ್ಕೆ ಹೋಗುವಂತೆ ಅಧಿಕಾರಿಗಳ ಮೂಲಕ ಸೂಚನೆ ನೀಡಲಾಗಿದೆ. ಜಿಲ್ಲೆಯಲ್ಲಿ ನಿರಂತರವಾಗಿ ಮಳೆಯಾಗುತ್ತಿದ್ದು, ಜಮೀನುಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನೀರು ನಿಲ್ಲುತ್ತಿದೆ. ಇದರಿಂದಾಗಿ ಬೆಳೆ ಹಾನಿ ಸಂಭವಿಸುವ ಸಾಧ್ಯತೆ ಇದ್ದು, ಬೆಳೆಗಳನ್ನು ರಕ್ಷಿಸಿಕೊಳ್ಳಲು ಬಸಿಗಾಲುವೆ ನಿರ್ಮಿಸುವಂತೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಸಲಹೆ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**